# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದಲ್ಲಿ ಸಾರ್ವಜನಿಕ ವಿತರಣಾ ಪದ್ಧತಿಯಡಿ ವಿತರಿಸಲಾಗಿರುವ ಅಂತ್ಯೋದಯ ಅನ್ನ ಯೋಜನೆ (AAY) ಮತ್ತು ಆದ್ಯತಾ ಪಡಿತರ ಚೀಟಿಯನ್ನು ಹೊಂದಿರುವ ಕುಟುಂಬಗಳಿಗೆ ಅನ್ನಭಾಗ್ಯ ಯೋಜನೆಯಡಿ ಆಹಾರ ಧಾನ್ಯವನ್ನು ವಿತರಿಸುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ:ಆನಾಸ 322 ಡಿಆರ್‌ಎ 2021, ದಿನಾಂಕ:02.01.2023.

2) ಸರ್ಕಾರದ ಆದೇಶ ಸಂಖ್ಯೆ:ಆನಾಸ 84 ಡಿಆರ್‌ಎ 2023, ದಿನಾಂಕ:20.05.2023.

**ಪ್ರಸ್ತಾವನೆ:**

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಕೇಂದ್ರ ಸರ್ಕಾರವು ಸಾರ್ವಜನಿಕ ವಿತರಣಾ ಪದ್ಧತಿಯಡಿ ವಿತರಿಸಲಾಗಿರುವ ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಿಯನ್ನು ಹೊಂದಿರುವ ಕುಟುಂಬಕ್ಕೆ ಪ್ರತಿ ತಿಂಗಳು ಫಲಾನುಭವಿಗಳ ಪರಿಗಣನೆಗೆ ತೆಗೆದುಕೊಳ್ಳದೇ 35 ಕೆ.ಜಿ. ಆಹಾರ ಧಾನ್ಯವನ್ನು ಹಾಗೂ ಆದ್ಯತಾ ಪಡಿತರ ಚೀಟಿಯನ್ನು ಹೊಂದಿರುವ ಕುಟುಂಬದ ಪ್ರತಿ ಸದಸ್ಯರಿಗೆ ಪ್ರತಿ ತಿಂಗಳು 05 ಕೆ.ಜಿ. ಆಹಾರ ಧಾನ್ಯವನ್ನು ಉಚಿತವಾಗಿ ಒದಗಿಸುತ್ತಿದೆ. ಇದರೊಂದಿಗೆ ರಾಜ್ಯ ಸರ್ಕಾರದ ವತಿಯಿಂದ ಹೆಚ್ಚುವರಿಯಾಗಿ ವಿತರಿಸಲಾಗಿರುವ ಆದ್ಯತಾ ಪಡಿತರ ಚೀಟಿಗಳ ಪ್ರತಿ ಫಲಾನುಭವಿಗೆ ಪ್ರತಿ ತಿಂಗಳು 05 ಕೆ.ಜಿ. ಆಹಾರ ಧಾನ್ಯವನ್ನು ರಾಜ್ಯ ಸರ್ಕಾರದ ವೆಚ್ಚದಲ್ಲಿ ಉಚಿತವಾಗಿ ವಿತರಿಸಲಾಗುತ್ತಿದೆ.

ಮೇಲೆ ಓದಲಾದ (1)ರಲ್ಲಿನ ಸರ್ಕಾರದ ಆದೇಶದಲ್ಲಿ, ರಾಜ್ಯದಲ್ಲಿರುವ ಆದ್ಯತಾ ಪಡಿತರ ಚೀಟಿಗಳ ಪ್ರತಿ ಫಲಾನುಭವಿಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯನ್ವಯ ವಿತರಿಸಲಾಗುತ್ತಿರುವ 5 ಕೆ.ಜಿ. ಆಹಾರ ಧಾನ್ಯದೊಂದಿಗೆ ಹೆಚ್ಚುವರಿಯಾಗಿ 01 ಕೆ.ಜಿ. ಅಕ್ಕಿಯನ್ನು ಉಚಿತವಾಗಿ ವಿತರಿಸಲು ಆದೇಶಿಸಲಾಗಿದೆ.

ಮೇಲೆ ಓದಲಾದ (2)ರಲ್ಲಿನ ಸರ್ಕಾರದ ಆದೇಶದಲ್ಲಿ, ರಾಜ್ಯದಲ್ಲಿ ವಿತರಿಸಲಾಗಿರುವ ಆದ್ಯತಾ ಮತ್ತು ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಿಗಳ ಪ್ರತಿ ಫಲಾನುಭವಿಗೆ ಪ್ರತಿ ತಿಂಗಳು ಒಟ್ಟು 10 ಕೆ.ಜಿ. ಆಹಾರ ಧಾನ್ಯವನ್ನು ಉಚಿತವಾಗಿ ವಿತರಿಸಲು ತಾತ್ವಿಕ ಅನುಮೋದನೆಯನ್ನು ನೀಡಲಾಗಿದೆ.

ದಿನಾಂಕ:02.06.2023 ರಂದು ನಡೆದ ಸಚಿವ ಸಂಪುಟ ಸಭೆಯ ನಿರ್ಣಯದಂತೆ, ರಾಜ್ಯದಲ್ಲಿರುವ ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತಾ ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಪ್ರತಿ ತಿಂಗಳು 10 ಕೆ.ಜಿ. ಆಹಾರ ಧಾನ್ಯವನ್ನು ವಿತರಿಸಲು ತೀರ್ಮಾನಿಸಲಾಗಿದ್ದು, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆನಾಸ 84 ಡಿಆರ್‌ಎ 2023 (ಇ-ಆಫೀಸ್)**

**ಬೆಂಗಳೂರು, ದಿನಾಂಕ:03.06.2023**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯನ್ವಯ ವಿತರಿಸಲಾಗಿರುವ ಅಂತ್ಯೋದಯ ಅನ್ನ ಯೋಜನೆ (AAY), ಆದ್ಯತಾ ಕುಟುಂಬ ಪಡಿತರ ಚೀಟಿಗಳು ಹಾಗೂ ರಾಜ್ಯ

ಸರ್ಕಾರದಿಂದ ಹೆಚ್ಚುವರಿಯಾಗಿ ವಿತರಿಸಲಾಗಿರುವ ಆದ್ಯತಾ ಪಡಿತರ ಚೀಟಿಗಳ ಕುಟುಂಬದ ಪ್ರತಿ ಸದಸ್ಯರಿಗೆ ತಲಾ 10 ಕೆ.ಜಿ. ಆಹಾರ ಧಾನ್ಯವನ್ನು ದಿನಾಂಕ:01.07.2023 ರಿಂದ ಅನ್ವಯವಾಗುವಂತೆ ಉಚಿತವಾಗಿ ವಿತರಿಸಲು ಆದೇಶಿಸಿದೆ.

ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 50 ವೆಚ್ಚ-5 ದಿನಾಂಕ: 01.06.2023ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
03/6/23
(ಹನುಮಂತರಾಜು.ಎ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆಹಾರ, ನಾಗರಿಕ ಸರಬರಾಜು, ಗ್ರಾಹಕರ ವ್ಯವಹಾರಗಳು
ಮತ್ತು ಕಾನೂನು ಮಾಪನಶಾಸ್ತ್ರ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರರು (ಜಿ & ಎಸ್.ಎಸ್.ಎ)(ಎ ಮತ್ತು ಇ) ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು.
4. ಆಯುಕ್ತರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ ಬೆಂಗಳೂರು.
6. ಸರ್ಕಾರದ ಜಂಟಿ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, (ಪ್ರಕರಣ ಸಂಖ್ಯೆ: 320) ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 5&7) ವಿಧಾನಸೌಧ, ಬೆಂಗಳೂರು.
8. ಎಲ್ಲಾ ಜಿಲ್ಲಾಧಿಕಾರಿಗಳು.
9. ಎಲ್ಲಾ ಜಂಟಿ/ಉಪ ನಿರ್ದೇಶಕರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, (ಆಯುಕ್ತರು ಮುಖಾಂತರ)
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ:**

1. ಸನ್ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಬೆಂಗಳೂರು.